# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ–164/ಪಿಆರ್//2021–22 ದಿನಾಂಕ: 18–10–2021

## ಅಕ್ಟೋಬರ್ ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ_13–10–2021 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಸಂಜೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಜನಾರ್ಧನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗಿರಿನಗರ) ಉಪವಿಭಾಗ |
| 3 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್–164, ವಿದ್ಯಾಪೀಠ |
| 4 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್–164, ವಿದ್ಯಾಪೀಠ |
| 5 | ಶ್ರೀ ಎಂ. ಸುರೇಶ್ | ಕಂದಾಯ ವಸೂಲಿಗಾರರು |
| 6 | ಡಾ॥ ಸುರ್ಜಿತ್ .ಟಿ | ವೈದ್ಯಾಧಿಕಾರಿಗಳು |
| 7 | ಶ್ರೀ ಮಹೇಶ್ | ಮಾರ್ಷಲ್ |
| 8 | ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 9 | ತ್ಯಾಗರಾಜ್ | ಅರಣ್ಯ ಇಲಾಖೆ |
| 10 | ಶ್ರೀ ಕುಮಾರ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1. ವಾರ್ಡ್–164ರ ವ್ಯಾಪ್ತಿಯಲ್ಲಿನ ಆರೋಗ್ಯ ಇಲಾಖೆಯ ಕೋವಿಡ್ ಲಸಿಕೆ ಪ್ರಗತಿ ಬಗ್ಗೆ ಚರ್ಚೆ ಪ್ರಾರಂಭಿಸಲಾಯಿತು. ಈ ಬಗ್ಗೆ ಹಾಜರಿದ್ದ ಡಾ॥ ಸುರ್ಜಿತ್ ರವರು ವಿವರಿಸುತ್ತಾ ಕೋವಿಡ್ ಲಸಿಕೆಯನ್ನು ಹಾಕಲಾಗುತ್ತಿದ್ದು, ಯಶಸ್ವಿಯಾಗಿ ಲಸಿಕಾ ಕಾರ್ಯಕ್ರಮ ನಡೆಯುತ್ತಿರುತ್ತದೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳು ಈ ತಿಂಗಳಲ್ಲಿ ಯಾವುದೂ ಇರುವುದಿಲ್ಲವೆಂದು ತಿಳಿಸಿರುತ್ತಾರೆ. ಹಾಲಿ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಸಾಂಕ್ರಾಮಿಕ ರೋಗವು ತಹಬಂದಿಗೆ ಬಂದಿರುವುದಾಗಿ ಹಾಗೂ ಯಾವುದೇ ಕೋವಿಡ್ ಕ್ಲಸ್ಟರ್ ಇಲ್ಲ ಎಂದು ಸಭೆಗೆ ವರದಿ ಮಾಡಿರುತ್ತಾರೆ.

(ಪು.ತಿ.ನೋ)

2. ನಂತರ ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿ, ಹಾಜರಿದ್ದ ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 6192 ಸ್ವತ್ತುಗಳಿದ್ದು, ಒಟ್ಟು ರೂ: 25.00 ಲಕ್ಷಗಳಷ್ಟು ಕಂದಾಯ ವಸೂಲಾಗಿರುವ ಬಗ್ಗೆ ವರದಿ ನೀಡಿರುತ್ತಾರೆ. ನೋಡಲ್ ಅಧಿಕಾರಿಗಳು ಕಂದಾಯ ಬಾಕಿ ಉಳಿಸಿಕೊಂಡಿರುವ ಬಿ.ಎಂ.ಟಿ.ಸಿ ಸಂಸ್ಥೆಗೆ ನೋಟೀಸ್ ಜಾರಿ ಮಾಡಲು ಸದರಿ ಅಧಿಕಾರಿಗಳಿಗೆ ಸೂಚನೆ ನೀಡಿರುತ್ತಾರೆ. ಹಾಗೂ ಕಂದಾಯ ವಸೂಲಾತಿ ಬಗ್ಗೆ ಹೆಚ್ಚಿನ ಗಮನ ಹರಿಸಲು ಸೂಚಿಸಿರುತ್ತಾರೆ ಮುಂದುವರೆದು ಕಂದಾಯ ಅಧಿಕಾರಿಗಳು ಮತದಾರರ ಗುರುತಿನ ಚೀಟಿಯ ಸರ್ವೇ ಕಾರ್ಯ ಕೈಗೊಂಡಿರುವುದಾಗಿ ಸಭೆಗೆ ತಿಳಿಸಿರುತ್ತಾರೆ.

3. ಸಭೆಯಲ್ಲಿ ಹಾಜರಿದ್ದ ಮಾರ್ಷಲ್‌ಗಳೊಂದಿಗೆ ಚರ್ಚಿಸಿ ವಾರ್ಡ್ ವ್ಯಾಪ್ತಿಯಲ್ಲಿ ಕಸ ಸಂಗ್ರಹವಾಗುವ ಸ್ಥಳಗಳನ್ನು ಗುರುತಿಸಿ ರಸ್ತೆಯಲ್ಲಿ ಕಸ ಹಾಕುವವರಿಗೆ ದಂಡ ವಿಧಿಸಲು ಸೂಚಿಸಲಾಯಿತು. ಕತ್ರಿಗುಪ್ಪೆ ಮುಖ್ಯರಸ್ತೆಗೆ ಹೊಂದಿಕೊಂಡಿರುವ ಕೆಲವು ರಸ್ತೆಗಳಲ್ಲಿ ಕಸ ಸುರಿಯುತ್ತಿರುವ ಬಗ್ಗೆ ಗಮನ ಹರಿಸಲು ಸೂಚಿಸಲಾಯಿತು. ರಸ್ತೆ ಬದಿಗಳಲ್ಲಿ ತಳ್ಳುವ ಗಾಡಿಗಳಿಂದ ಉಂಟಾಗುವ ಕಸದ ಸಂಗ್ರಹಣೆ ಬಗ್ಗೆ ಗಮನ ಹರಿಸಲು ಸೂಚಿಸಲಾಯಿತು, ಕತ್ರಿಗುಪ್ಪೆ ಮುಖ್ಯರಸ್ತೆಯಲ್ಲಿನ ಎ.ಐ.ಆರ್.ಡಿ ಶಾಲಾ ಮುಂಭಾಗದಲ್ಲಿ ತಳ್ಳುವ ಗಾಡಿಗಳಲ್ಲಿ ತರಕಾರಿಗಳನ್ನು ಮಾರಾಟ ಮಾಡುತ್ತಿದ್ದು, ಅದರ ತೆರವಿಗೆ ಸೂಚಿಸಲಾಗಿದೆ.

4. ಸಭೆಯಲ್ಲಿ ಹಾಜರಿದ್ದ ಶ್ರೀ ಸಾಯಿಕುಮಾರ್ ನಾಗರೀಕರು ರವರು ರಸ್ತೆ ಬದಿಯಲ್ಲಿ ತೋಳು ಚರಂಡಿಗಳ ಸ್ವಚ್ಛತೆ ಬಗ್ಗೆ ಗಮನ ಹರಿಸಲು, ಕಸದ ಸಮರ್ಪಕ ವಿಲೇವಾರಿ ಬಗ್ಗೆ ಗಮನಹರಿಸಲು ಸೂಚಿಸಿರುತ್ತಾರೆ ಮತ್ತು ಕಟ್ಟಡದ ತ್ಯಾಜ್ಯಗಳು ಕೆಲವು ಜಾಗಗಳಲ್ಲಿ ಇದ್ದು, ತೆರವುಗೊಳಿಸಲು ಕೋರಿರುತ್ತಾರೆ.

5. ಮಳೆಗಾಲದಲ್ಲಿ ಮರಗಳ ರೆಂಬೆಕೊಂಬೆಗಳು ಬೀಳುವ ಹಂತದಲ್ಲಿದ್ದು, ಅವುಗಳನ್ನು ಗುರುತಿಸಿ ತೆರವುಗೊಳಿಸಲು ಅರಣ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿ:

1. ಮಾನ್ಯ ಆಯುಕ್ತರು, ಬೃ.ಬೆಂ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಅಪ್ಪ ಜಾರಿಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಮಾರ್ಷಲ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ಮಾರ್ಷಲ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.